**ಕರ್ನಾಟಕ ಸರ್ಕಾರ**

ಸಂಖ್ಯೆ: ಡಿಟಿಇ 20 ಬಿಎಲ್‌ಡಿ 2016
ಅಡಕ:

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು-560 001,
ದಿನಾಂಕ: 19-09-2020.

**ಸುತ್ತೋಲೆ**

ವಿಷಯ: ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ ಪಾಲಿಟೆಕ್ನಿಕ್‌ಗಳು ಹಾಗೂ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ವಿಕಲಚೇತನ ವ್ಯಕ್ತಿಗಳಿಗೆ ಓಡಾಡಲು ಅನುಕೂಲವಾಗುವಂತೆ ಅಡೆತಡೆ ರಹಿತ ವಾತಾವರಣವನ್ನು ನಿರ್ಮಿಸುವ ಬಗ್ಗೆ.

ಉಲ್ಲೇಖ: ಸರ್ಕಾರದ ಪತ್ರ ಸಂಖ್ಯೆ: ಇಡಿ 69 ವಿವಿಧ 2020, ದಿನಾಂಕ: 08-09-2020.

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರ ಮತ್ತು ಅಡಕಗಳನ್ನು ಇದರೊಂದಿಗೆ ಲಗತ್ತಿಸಿದೆ. ಸದರಿ ಪತ್ರದಲ್ಲಿ ರಾಜ್ಯ ಸರ್ಕಾರದ ಎಲ್ಲಾ ಸರ್ಕಾರಿ ಕಛೇರಿಗಳ ಕಟ್ಟಡಗಳು, ವಿಶ್ವವಿದ್ಯಾಲಯ ಕಟ್ಟಡ, ಹೊಸದಾಗಿ ನಿರ್ಮಾಣ ಮಾಡುವ ಕಟ್ಟಡಗಳು ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಕಡ್ಡಾಯವಾಗಿ ವಿಕಲಚೇತನರು ಸುಗಮವಾಗಿ ಓಡಾಡಲು ಅನುಕೂಲವಾಗುವಂತೆ ಇಳಿಜಾರು ದಾರಿ, ಅಂಗವಿಕಲ ಸ್ನೇಹಿ ಶೌಚಾಲಯ, ಸೂಚನಾ ಫಲಕಗಳು, ಟ್ಯಾಗ್ ಟೈಲ್, ಲಿಫ್ಟ್‌ಗಳಲ್ಲಿ ಬ್ರೈಲ್ ಸಂಕೇತ ಮತ್ತು ಶಬ್ದ ಸಂಕೇತಗಳನ್ನು ಅಳವಡಿಸಲು ಸೂಕ್ತ ಕ್ರಮಕೈಗೊಳ್ಳುವಂತೆ ಸೂಚಿಸಲಾಗಿದೆ.

ಈ ಹಿನ್ನೆಲೆಯಲ್ಲಿ ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನಕ್ಕೊಳಪಡುವ ರಾಜ್ಯದ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ ಪಾಲಿಟೆಕ್ನಿಕ್‌ಗಳು ಹಾಗೂ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಹಾಗೂ ಕಛೇರಿಗಳಲ್ಲಿ ಕಡ್ಡಾಯವಾಗಿ ವಿಕಲಚೇತನರು ಸುಗಮವಾಗಿ ಓಡಾಡಲು ಅನುಕೂಲವಾಗುವಂತೆ ಇಳಿಜಾರು ದಾರಿ, ಅಂಗವಿಕಲ ಸ್ನೇಹಿ ಶೌಚಾಲಯ ಸೂಚನಾ ಫಲಕಗಳು, ಟ್ಯಾಗ್ ಟೈಲ್, ಲಿಫ್ಟ್‌ಗಳಲ್ಲಿ ಬ್ರೈಲ್ ಸಂಕೇತ ಮತ್ತು ಶಬ್ದ ಸಂಕೇತಗಳನ್ನು ಅಳವಡಿಸಲು ಸೂಕ್ತ ಕ್ರಮಕೈಗೊಳ್ಳಲು ಸೂಚಿಸಲಾಗಿದೆ.

**ಇವರಿಗೆ**

ಪ್ರಾಚಾರ್ಯರು, ರಾಜ್ಯದ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ ಪಾಲಿಟೆಕ್ನಿಕ್‌ಗಳು ಹಾಗೂ ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು - ಇವರ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ. [ತಮ್ಮ ಸಂಸ್ಥೆಗಳಲ್ಲಿ ರ್‍ಯಾಂಪ್ (ಇಳಿಜಾರು ದಾರಿ) ಅಂಗವಿಕಲ ಸ್ನೇಹಿ ಶೌಚಾಲಯ ಇತರೆ ಲಭ್ಯವಾದ ಎಲ್ಲಾ ಮಾಹಿತಿಯನ್ನು ದಿನಾಂಕ: 21/09/2020 ರ ಮ.12.30 ರೊಳಗೆ ಈ ಕಚೇರಿಗೆ ನೀಡುವುದು]

dte.bld@gmail.com

ನಿರ್ದೇಶಕರು

**ಪ್ರತಿ**

ಇ-ಆಡಳಿತ ವಿಭಾಗಕ್ಕೆ ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸಲು.

## ಕರ್ನಾಟಕ ಸರ್ಕಾರ

ಸಂಖ್ಯೆ:ಇಡಿ 69 ವಿವಿಧ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ:8-09-2020

ಇವರಿಂದ,

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ
ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ)
ಬೆಂಗಳೂರು-560001

ಇವರಿಗೆ:

1. ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು-560 001.
2. ನಿರ್ದೇಶಕರು, ತಾಂತ್ರಿಕ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು-560 001.
3. ಆಡಳಿತಾಧಿಕಾರಿ, ಎನ್.ಸಿ.ಸಿ ನಿರ್ದೇಶನಾಲಯ, ನಂ.8, ಕನ್ನಿಂಗ್ ಹ್ಯಾಂ ರಸ್ತೆ, ಬೆಂಗಳೂರು.
4. ಕುಲಸಚಿವರು, ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು-560 056.
5. ಕುಲಸಚಿವರು, ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯ, ಬೆಂಗಳೂರು
6. ಕುಲಸಚಿವರು, ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಬೆಂಗಳೂರು
7. ಕುಲಸಚಿವರು, ಮೈಸೂರು ವಿಶ್ವವಿದ್ಯಾಲಯ, ಮೈಸೂರು-570 005.
8. ಕುಲಸಚಿವರು, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ-580 003.
9. ಕುಲಸಚಿವರು, ಗುಲ್ಬರ್ಗಾ ವಿಶ್ವವಿದ್ಯಾಲಯ, ಕಲಬುರಗಿ-585 106.
10. ಕುಲಸಚಿವರು, ಮಂಗಳೂರು ವಿಶ್ವವಿದ್ಯಾಲಯ, ಮಂಗಳೂರು-574 199.
11. ಕುಲಸಚಿವರು, ಕುವೆಂಪು ವಿಶ್ವವಿದ್ಯಾಲಯ, ಶಿವಮೊಗ್ಗ-577 451.
12. ಕುಲಸಚಿವರು, ತುಮಕೂರು ವಿಶ್ವವಿದ್ಯಾಲಯ, ತುಮಕೂರು-572 101
13. ಕುಲಸಚಿವರು, ಕನ್ನಡ ವಿಶ್ವವಿದ್ಯಾಲಯ, ಹಂಪಿ-583 276.
14. ಕುಲಸಚಿವರು, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ, ಮೈಸೂರು-570 006.
15. ಕುಲಸಚಿವರು, ಕರ್ನಾಟಕ ರಾಜ್ಯ ಮಹಿಳಾ ವಿಶ್ವವಿದ್ಯಾಲಯ, ವಿಜಯಪುರ-586 101
16. ಕುಲಸಚಿವರು, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ-590 014.
17. ಕುಲಸಚಿವರು, ರಾಣಿ ಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ
18. ಕುಲಸಚಿವರು, ದಾವಣಗೆರೆ ವಿಶ್ವವಿದ್ಯಾಲಯ, ದಾವಣಗೆರೆ
19. ಕುಲಸಚಿವರು, ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯ, ಬಳ್ಳಾರಿ.

18/09

20. ಕುಲಸಚಿವರು, ಡಾ॥ ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ, ಮೈಸೂರು.

21. ಕುಲಸಚಿವರು, ಕರ್ನಾಟಕ ರಾಜ್ಯ ಸಂಸ್ಕೃತ ವಿಶ್ವವಿದ್ಯಾಲಯ, ಬೆಂಗಳೂರು –560 018.

22. ಕುಲಸಚಿವರು, ಕರ್ನಾಟಕ ಜಾನಪದ ವಿಶ್ವವಿದ್ಯಾಲಯ, ಗೊಟಗೋಡಿ, ಹಾವೇರಿ.

ಮಾನ್ಯರೇ,

ವಿಷಯ: ಎಲ್ಲಾ ಸರ್ಕಾರಿ ಪ್ರಮುಖ ಕಚೇರಿಗಳು ವಿಶ್ವವಿದ್ಯಾಲಯ ಕಟ್ಟಡ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ವಿಕಲಚೇತನ ವ್ಯಕ್ತಿಗಳಿಗೆ ಓಡಾಡಲು ಅನುಕೂಲವಾಗುವಂತೆ ಅಡೆ ತಡೆ ವಾತಾವರಣವನ್ನು ನಿರ್ಮಿಸುವ ಕುರಿತು

ಉಲ್ಲೇಖ: ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರ ಪತ್ರ ಸಂಖ್ಯೆ:ಮಮಇ 177 ಪಿಹೆಚ್‌ಪಿ 2020.

********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರ ಮತ್ತು ಅಡಕಗಳನ್ನು ಇದರೊಂದಿಗೆ ಲಗತ್ತಿಸಿದೆ. ಸದರಿ ಪತ್ರದಲ್ಲಿ ಕೋರಿರುವಂತೆ ರಾಜ್ಯ ಸರ್ಕಾರದ ಎಲ್ಲಾ ಸರ್ಕಾರಿ ಕಚೇರಿಗಳ ಕಟ್ಟಡಗಳು, ವಿಶ್ವವಿದ್ಯಾಲಯ ಕಟ್ಟಡ, ಹೊಸದಾಗಿ ನಿರ್ಮಾಣ ಮಾಡುವ ಕಟ್ಟಡಗಳು ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಕಡ್ಡಾಯವಾಗಿ ವಿಕಲಚೇತನರು ಸುಗಮವಾಗಿ ಓಡಾಡಲು ಅನುಕೂಲವಾಗುವಂತೆ ಇಳಿಜಾರು ದಾರಿ, ಅಂಗವಿಕಲ ಸ್ನೇಹಿ ಶೌಚಾಲಯ ಸೂಚನಾ ಫಲಕಗಳು, ಟ್ಯಾಗ್ ಟೈಲ್, ಲಿಫ್ಟ್‌ಗಳಲ್ಲಿ ಬ್ರೈಲ್ ಸಂಕೇತ ಮತ್ತು ಶಬ್ದ ಸಂಕೇತಗಳನ್ನು ಅಳವಡಿಸಲು ಸೂಕ್ತ ಕ್ರಮಕೈಗೊಳ್ಳುವಂತೆ ತಮ್ಮನ್ನು ಕೋರಲು ನಿರ್ದೇಶಿತನಾಗಿದ್ದೇನೆ.

ತಮ್ಮ ನಂಬುಗೆಯ,

(ಮಹೇಶ್.ಆರ್)

ಸರ್ಕಾರದ ಅಧೀನ ಕಾರ್ಯದರ್ಶಿ

ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯಗಳು-2 & ಸಾಮಾನ್ಯ-2)

186

ಡಾ|| ಎನ್. ನಾಗಾಂಬಿಕಾ ದೇವಿ, ಭಾ.ಆ.ಸೇ.,
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಇಲಾಖೆ

ಕಛೇರಿ ದೂರವಾಣಿ : 080-22353991
080-22032562
ಕರ್ನಾಟಕ ಸರ್ಕಾರದ ಸಚಿವಾಲಯ
3ನೇ ಗೇಟ್, ಮೊದಲನೇ ಮಹಡಿ
ಎಂ.ಎಸ್. ಬಿಲ್ಡಿಂಗ್, ಬೆಂಗಳೂರು - 560 001
ಇ-ಮೇಲ್ : prlsecy-wc@karnataka.gov.in

ಸಂಖ್ಯೆ:ಮಮಇ 177 ಪಿಹೆಚ್ ಪಿ 2020

ದಿ:14.08.2020

E.no-16/2087/20
18/08/2020

ಮಾನ್ಯರೆ,

ವಿಷಯ: ಎಲ್ಲಾ ಸರ್ಕಾರಿ ಪ್ರಮುಖ ಕಛೇರಿಗಳು, ವಿಶ್ವವಿದ್ಯಾಲಯ ಕಟ್ಟಡ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ವಿಕಲಚೇತನ ವ್ಯಕ್ತಿಗಳಿಗೆ ಓಡಾಡಲು ಅನುಕೂಲವಾಗುವಂತೆ ಅಡೆ ತಡೆ ವಾತಾವರಣವನ್ನು ನಿರ್ಮಿಸುವ ಬಗ್ಗೆ.

ಉಲ್ಲೇಖ: ಸರ್ಕಾರದ ಸುತ್ತೋಲೆ ಸಂಖ್ಯೆ:ಮಮಇ 14 ಪಿಹೆಚ್ ಪಿ 2010, ದಿ:20.09.2010.

*****

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, ಅಂಗವಿಕಲ ವ್ಯಕ್ತಿಗಳ ಅಧಿನಿಯಮ 1995ರ ಪರಿಚ್ಛೇದ 46ರಂತೆ ಪ್ರತಿ ಸಾರ್ವಜನಿಕ ಕಟ್ಟಡ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಅಂಗವಿಕಲರು ಸುಲಭವಾಗಿ ಓಡಾಡಲು ಅನುವಾಗುವಂತೆ ಇಳಿಜಾರು ದಾರಿ, ಅಂಗವಿಕಲ ಸ್ನೇಹಿ ಶೌಚಾಲಯ, ಸೂಚನಾ ಫಲಕಗಳು, ಟ್ಯಾಗ್ ಟೈಲ್, ಫ್ಲೋರಿಂಗ್, ಲಿಫ್ಟಗಳಲ್ಲಿ ಬ್ರೈಲ್ ಸಂಕೇತ ಮತ್ತು ಶಬ್ದ ಸಂಕೇತಗಳನ್ನು ಕಲ್ಪಿಸಲು ಅವಕಾಶವಿದೆ ಎಂದು ಈಗಾಗಲೇ ಸುತ್ತೋಲೆ ಹೊರಡಿಸಲಾಗಿರುತ್ತದೆ.

ರಾಜ್ಯದಲ್ಲಿ ಎಲ್ಲಾ ಸರ್ಕಾರಿ ಕಟ್ಟಡಗಳಲ್ಲಿ ವಿಕಲಚೇತನರು ಹಾಗೂ ಹಿರಿಯ ನಾಗರಿಕರು, ಸುಗಮವಾಗಿ ಓಡಾಡಲು ಅಗತ್ಯವಾದ ಅಡೆ ತಡೆ ರಹಿತ ವಾತಾವರಣ ನಿರ್ಮಿಸಲು ಹಾಗೂ ಅಂಗವಿಕಲರ ಹಕ್ಕುಗಳ ಅಧಿನಿಯಮ 2016ರ ಪರಿಚ್ಛೇದ 45ರಂತೆ The appropriate Government and the local authorities shall formulate and publish an action plan based on prioritization, for providing accessibility in all their building and spaces providing essential services such as all primary health centers, civil hospitals, school, railway station and bus stop ಎಂದು ತಿಳಿಸಿದೆ.

ಈ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರದ ಎಲ್ಲಾ ಸರ್ಕಾರಿ ಕಛೇರಿಗಳ ಕಟ್ಟಡಗಳು, ವಿಶ್ವವಿದ್ಯಾಲಯ ಕಟ್ಟಡ, ಹೊಸದಾಗಿ ನಿರ್ಮಾಣ ಮಾಡುವ ಕಟ್ಟಡಗಳು ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಕಡ್ಡಾಯವಾಗಿ ವಿಕಲಚೇತನರು ಸುಗಮವಾಗಿ ಓಡಾಡಲು ಅನುಕೂಲವಾಗುವಂತೆ ಇಳಿಜಾರು ದಾರಿ, ಅಂಗವಿಕಲ ಸ್ನೇಹಿ ಶೌಚಾಲಯ, ಸೂಚನಾ ಫಲಕಗಳು, ಟ್ಯಾಗ್ ಟೈಲ್, ಲಿಫ್ಟ್ ಗಳಲ್ಲಿ ಬ್ರೈಲ್ ಸಂಕೇತ ಮತ್ತು ಶಬ್ದ ಸಂಕೇತಗಳನ್ನು ಅಳವಡಿಸಲು ಸೂಕ್ತ ಕ್ರಮಕೈಗೊಳ್ಳುವಂತೆ ಕೋರಲಾಗಿದೆ.

ತಮ್ಮ ವಿಶ್ವಾಸಿ,

(ಡಾ|| ಎನ್. ನಾಗಾಂಬಿಕಾ ದೇವಿ)

ಶ್ರೀ ಇ.ವಿ.ರಮಣರೆಡ್ಡಿ, ಭಾ.ಆ.ಸೇ.,
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ(ಪ್ರ),
ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ),
ಬಹುಮಹಡಿ ಕಟ್ಟಡ, ಬೆಂಗಳೂರು-560 001

ಕರ್ನಾಟಕ ಸರ್ಕಾರ

ಸಂಖ್ಯೆ: ಮಮಇ: 14: ಪಿಹೆಚ್‌ಪಿ: 2010

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 20.09.2010

## ಸುತ್ತೋಲೆ

ಅಂಗವಿಕಲ ವ್ಯಕ್ತಿಗಳ (ಸಮಾನ ಅವಕಾಶ, ಹಕ್ಕುಗಳ ಸಂರಕ್ಷಣೆ ಮತ್ತು ಸಂಪೂರ್ಣ ಭಾಗವಹಿಸುವಿಕೆ) ಅಧಿನಿಯಮ 1995 ಜಾರಿಯಲ್ಲಿದೆ. ಅಂಗವಿಕಲರ ಅಧಿನಿಯಮ ಅನುಷ್ಠಾನದ ಪರಿಶೀಲನೆ ಕುರಿತು ಅಪರ ಮುಖ್ಯ ಕಾರ್ಯದರ್ಶಿಯವರ ಅಧ್ಯಕ್ಷತೆಯಲ್ಲಿ ರಾಜ್ಯ ಸರ್ಕಾರವು ರಚಿಸಿರುವ ನೋಡಲ್ ಸಮಿತಿ ಸಭೆಯಲ್ಲಿ ಎಲ್ಲಾ ಇಲಾಖೆಗಳೊಂದಿಗೆ ಸಮನ್ವಯಗೊಳಿಸಿ ಅಂಗವಿಕಲರಿಗೆ ಸಂಬಂಧಿಸಿದಂತೆ ಕಛೇರಿ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ತಡೆರಹಿತ ವಾತಾವರಣ ಮತ್ತು ಮೀಸಲಾತಿಯನುಸಾರ ವಿವಿಧ ಸೌಲಭ್ಯ ಒದಗಿಸಬೇಕಾಗಿದೆ.

ಅಂಗವಿಕಲರ ಅಧಿನಿಯಮ 1995 ರ ಪರಿಚ್ಛೇದ 46 ರಂತೆ ಪ್ರತಿ ಸಾರ್ವಜನಿಕ ಕಟ್ಟಡ ಹಾಗೂ ಸ್ಥಳಗಳಲ್ಲಿ ಅಂಗವಿಕಲರು ಸುಲಭವಾಗಿ ಓಡಾಡಲು ಅನುವಾಗುವಂತೆ ಇಳಿಜಾರು ದಾರಿ, ಅಂಗವಿಕಲ ಸ್ನೇಹಿ ಶೌಚಾಲಯ, ಸೂಚನಾ ಫಲಕಗಳು, ಟೀಕ್ ಟೈಲ್ ಫ್ಲೋರಿಂಗ್, ಲಿಫ್ಟಗಳಲ್ಲಿ ಬ್ರೈಲ್ ಸಂಕೇತ ಮತ್ತು ಶಬ್ದ ಸಂಕೇತಗಳನ್ನು ಕಲ್ಪಿಸಲು ಅವಶ್ಯವಿದೆ. ಅದರಂತೆ, ಅಂಗವಿಕಲರಿಗೆ ರಾಜ್ಯಾದ್ಯಂತ ಸರ್ಕಾರಿ ಕಛೇರಿ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ತಡೆರಹಿತ ವಾತಾವರಣ ಕಲ್ಪಿಸಿರುವ ಬಗ್ಗೆ ಖಾತ್ರಿಪಡಿಸಿಕೊಳ್ಳುವ ಮೇಲ್ವಿಚಾರಣೆಗೆ ಅಂಗವಿಕಲರ ಅಧಿನಿಯಮ ಕಛೇರಿಯು ಕಾರ್ಯಪ್ರವೃತ್ತವಾಗಿದೆ.

ಅಂಗವಿಕಲರಿಗೆ (ಸಮಾನ ಅವಕಾಶ, ಹಕ್ಕುಗಳ ಸಂರಕ್ಷಣೆ ಮತ್ತು ಸಂಪೂರ್ಣ ಭಾಗವಹಿಸುವಿಕೆ) ಕಾಯ್ದೆ 1995 ರಲ್ಲಿ ಸಾರ್ವಜನಿಕ ಸ್ಥಳಗಳಲ್ಲಿ ಅಂಗವಿಕಲರಿಗೆ ಅನುಕೂಲ ವಾತಾವರಣ ಕಲ್ಪಿಸಬೇಕೆಂಬ ನಿಯಮ ಜಾರಿಗೆ ಆದೇಶಿಸುವಂತೆ ಕೋರಿ ರಾಜ್ಯ

313

84

ನ್ಯಾಯಾಲಯದಲ್ಲಿ ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಂಖ್ಯೆ: 37434/09 ನ್ನು ವಿಭಾಗೀಯ ಪೀಠವು ಕೂಲಂಕಷವಾಗಿ ಪರಿಶೀಲಿಸಿ ದಿನಾಂಕ: 09.04.2010 ರಂದು ನೀಡಿದ ತೀರ್ಪು ಈ ಕೆಳಗಿನಂತಿದೆ:-

457

" 1) P.W.D. shall make immediate and necessary arrangements for barrier free access to disabled persons at Vishweshwaraiah Tower, Commissioner for Persons with disabilities and Multi-Stroried Building.

2) The respondents also shall see that necessary circular is issued to the concerned public offices other than Government offices to provide proper facility for the access of the disabled persons."

ದಿನಾಂಕ: 09.04.2010ರ ತೀರ್ಪಿನಲ್ಲಿರುವ ಅಂಶಗಳು ರಾಜ್ಯ ಸರ್ಕಾರದ ಎಲ್ಲಾ ಇಲಾಖೆಗಳಿಗೂ ಕಡ್ಡಾಯವಾಗಿ ಅನ್ವಯಿಸುವುದರಿಂದ ಅದರಂತೆ, ಅಂಗವಿಕಲರಿಗೆ ಸಾರ್ವಜನಿಕ ಕಛೇರಿಗಳಲ್ಲಿ ತಡೆರಹಿತ ವಾತಾವರಣ ನಿರ್ಮಿಸುವ ಜವಾಬ್ದಾರಿಯನ್ನು ಲೋಕೋಪಯೋಗಿ ಇಲಾಖೆಯು ವಹಿಸತಕ್ಕದ್ದು ಹಾಗೂ ಸಂಬಂಧಪಟ್ಟ ಇಲಾಖೆಯಾದ ಅಂಗವಿಕಲ ಅಧಿನಿಯಮ ಕಛೇರಿಯು ಅನುಸರಣಾ ಪ್ರಾಧಿಕಾರವಾಗಿರತಕ್ಕದ್ದು.

ಮಾನ್ಯ ಸರ್ವೋಚ್ಚ ನ್ಯಾಯಾಲಯ ಹಾಗೂ ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗ. ಸಾರ್ವಜನಿಕ ಹಿತಾಸಕ್ತಿ ಅರ್ಜಿಗಳ ಮೇಲೆ ಅಂಗವಿಕಲರ ಅಧಿನಿಯಮ ಅನುಷ್ಠಾನವನ್ನು ಪರಿಶೀಲನೆ ಮಾಡುತ್ತಿರುವುದರಿಂದ ರಾಜ್ಯಾದ್ಯಂತ ತಮ್ಮ ಇಲಾಖಾ ವ್ಯಾಪ್ತಿಗೂ ಳಪಡುವ ಅಧೀನ ಕಛೇರಿಗಳಲ್ಲಿ ಅಂಗವಿಕಲರ ಅಧಿನಿಯಮ ಅನುಷ್ಠಾನಗೊಂಡ ಕಾರ್ಯಕ್ರಮಗಳ ಬಗ್ಗೆ ಆಗ್ಗಿಂದಾಗ್ಗೆ ಪರಿಶೀಲಿಸಿ ನೋಡತಕ್ಕದ್ದು.

ಲೋಕೋಪಯೋಗಿ ಇಲಾಖೆಯು ಸರ್ಕಾರಿ ಕಛೇರಿಗಳ ಕಟ್ಟಡ ನಿರ್ಮಿಸುವ ನಕ್ಷೆಯಲ್ಲಿ ಅಂಗವಿಕಲರಿಗಾಗಿ ಇಳಿಜಾರು ವ್ಯವಸ್ಥೆ ಹಾಗೂ ವಾಹನ ನಿಲುಗಡೆಗೆ ಸೂಕ್ತ ಸ್ಥಳ ವ್ಯವಸ್ಥೆಯನ್ನು ಅಳವಡಿಸಿ ಕಟ್ಟಡ ಕಾಮಗಾರಿಯನ್ನು ನಿರ್ಮಿಸುವಂತೆ ಹಾಗೂ ಈಗಾಗಲೇ ನಿರ್ಮಿಸಿರುವ ಕಟ್ಟಡಗಳಲ್ಲಿ ಅಂಗವಿಕಲರ ಅನುಕೂಲಕ್ಕಾಗಿ ನಿರ್ಮಿಸಿರುವ ಇಳಿಜಾರು ವ್ಯವಸ್ಥೆಯಲ್ಲಿ ತೊಂದರೆ

ಉದ್ಭವಿಸುವುದನ್ನು ಸಹ ತಕ್ಷಣ ಸರಿಪಡಿಸಲು ಸಂಬಂಧಿಸಿದ ತಮ್ಮ ಅಧೀನ ಕಛೇರಿಗಳ ಮುಖ್ಯಸ್ಥರಿಗೆ ನಿರ್ದೇಶನ ನೀಡುವಂತೆ ಸೂಚಿಸಲಾಗಿದೆ.

(ಸಿ.ಎನ್.ಸೀತಾರಾಮ್)
ಸರ್ಕಾರದ ಕಾರ್ಯದರ್ಶಿ,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ.

ಇವರಿಗೆ:

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು – ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗೆ 50 ಪ್ರತಿಗಳನ್ನು ಒದಗಿಸುವಂತೆ ಕೋರಲಾಗಿದೆ.

ಪ್ರತಿ:

1. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳು.
2. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ/ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ.
3. ಮುಖ್ಯ ಅಭಿಯಂತರರು, ಲೋಕೋಪಯೋಗಿ ಇಲಾಖೆ (ಕಟ್ಟಡಗಳು).
4. ಎಲ್ಲಾ ಜಿಲ್ಲಾಧಿಕಾರಿಗಳು.
5. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು.
6. ನಿರ್ದೇಶಕರು, ಅಂಗವಿಕಲರ ಮತ್ತು ಹಿರಿಯ ನಾಗರಿಕರ ಕಲ್ಯಾಣ ಇಲಾಖೆ, ಪೋಡಿಯಂ ಬ್ಲಾಕ್, ವಿಶ್ವೇಶ್ವರಯ್ಯ ಕೇಂದ್ರ, ಬೆಂಗಳೂರು.
7. ಆಯುಕ್ತರು, ಅಂಗವಿಕಲರ ಅಧಿನಿಯಮ, ತಂಬುಚೆಟ್ಟಿ ರಸ್ತೆ, ಕಾಕ್ಸ್ ಟೌನ್, ಬೆಂಗಳೂರು.
8. ಎಲ್ಲಾ ಜಿಲ್ಲೆಯ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ.
9. ಸರ್ಕಾರಿ ವಕೀಲರು, ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ.
10. ಶಾಖಾ ರಕ್ಷಾ ಕಡತ ಮತ್ತು ಹೆಚ್ಚುವರಿ ಪ್ರತಿಗಳು.